ಬೆಂಗಳೂರು ಉತ್ತರ ವಿಶ್ವವಿದ್ಯಾಲಯ

ಶ್ರೀ ದೇವರಾಜ ಅರಸು ಬಡಾವಣೆ, ಟಮಕ, ಕೋಲಾರ–563 103

---

ಸಂಖ್ಯೆ : ಬೆಂ.ಉ.ವಿ.ವಿ/ಕು.ಸ.ಕಾ/ಸಂ.ನವೀ/1384/ 2022–23 ದಿನಾಂಕ: 28.10.2022

**ಅಧಿಸೂಚನೆ**

ವಿಷಯ: 2022–23ನೇ ಶೈಕ್ಷಣಿಕ ಸಾಲಿಗೆ ಶ್ರೀ ಕೆ.ವೆಂಕಟಪತಪ್ಪ ದೈಹಿಕ ಶಿಕ್ಷಣ ಮಹಾವಿದ್ಯಾಲಯ ಬಿಪಿ.ಇಡಿ ಕಾಲೇಜಿಗೆ ಶಾಶ್ವತ ಸಂಯೋಜನೆ ನವೀಕರಣ ನೀಡುವ ಬಗ್ಗೆ

ಉಲ್ಲೇಖ: 1 ಇ.ಕ್ರಮಾಂಕ:ಇಡಿ 158ಯು.ಬಿ.ವಿ 2019 ದಿನಾಂಕ: 07.11.2019

2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 27.10.2022.

*****

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000ದ 59ನೇ ಪ್ರಕರಣದ 17ನೇ ಉಪಬಂಧದಲ್ಲಿ ಪ್ರದತ್ತವಾದ ಅಧಿಕಾರದನ್ವಯ ಬೆಂಗಳೂರು ಉತ್ತರ ವಿಶ್ವವಿದ್ಯಾಲಯವು 2022–23ನೇ ಶೈಕ್ಷಣಿಕ ಸಾಲಿಗೆ ಶ್ರೀ ಕೆ. ವೆಂಕಟಪತಪ್ಪ ದೈಹಿಕ ಶಿಕ್ಷಣ ಮಹಾವಿದ್ಯಾಲಯ ಸಿ.ವಿ.ವಿ ಕ್ಯಾಂಪಸ್ ಚಿಕ್ಕಬಳ್ಳಾಪುರ 562101 ನಡೆಸುತ್ತಿರುವ ಕೆಳಕಂಡ ಕೋರ್ಸಿಗೆ/ಕೋರ್ಸುಗಳಿಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಶಾಸ್ವತ ಸಂಯೋಜನೆಯನ್ನು 2019–20ನೇ ಶೈಕ್ಷಣಿಕ ವರ್ಷಕ್ಕೆ ಮಂಜೂರು ಮಾಡಲಾಗಿದ್ದು 2022–23ನೇ ಶಾಶ್ವತ ಸಂಯೋಜನೆಯನ್ನು ನವೀಕರಿಸಲಾಗಿದೆ.

| ಕ್ರಮ ಸಂಖ್ಯೆ | ವಿಷಯ | ಕೋರ್ಸು | ವಿದ್ಯಾರ್ಥಿ ಪ್ರಮಾಣ |
|---|---|---|---|
| 01 | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | ಬಿ.ಪಿ.ಇಡಿ | 50(ಐವತ್ತು) |

ವಿ.ಸೂ: (2019–20 ರಿಂದ 2022–23 ವರ್ಷದ ವರೆಗೂ ಶಾಶ್ವತ ಸಂಯೋಜನೆಯನೆ ಹೊಂದಿರುತ್ತದೆ.)

**ಷರತ್ತುಗಳು:**

1. ವಿಧ್ಯಾರ್ಥಿಗಳ ಪ್ರವೇಶವನ್ನು ಕಾಲಕಾಲಕ್ಕೆ ತಿದ್ದುಪಡಿಯಾದ ಕರ್ನಾಟಕ ಬಿ.ಪಿ.ಇಡಿ ಕೋರ್ಸು ಅಭ್ಯರ್ಥಿಗಳ ಆಯ್ಕೆ ನಿಯಮಗಳನ್ವಯ ಕಟ್ಟು- ನಿಟ್ಟಾಗಿ ಪಡೆಯತಕ್ಕದ್ದು.
2. ಕರ್ನಾಟಕ ಬಿ.ಪಿ.ಇಡಿ ಕೋರ್ಸುಗಳಿಗೆ ಅಭ್ಯರ್ಥಿಗಳ ಆಯ್ಕೆ ನಿಯಮಗಳು 1999 ರ 2(1)ನೇ ನಿಯಮದಡಿಯಲ್ಲಿ ನಿರ್ಧರಿಸಲಾಗಿರುವ ವಿಧ್ಯಾರ್ಥಿ ಪ್ರಮಾಣಕ್ಕೆ ಅನುಗುಣವಾಗಿ ಮತ್ತು ಪೂರಕವಾಗಿ ವಿಧಿಸಲಾಗಿರುವ ಷರತ್ತುಗಳಿಗೊಳಪಟ್ಟು ವಿಧ್ಯಾರ್ಥಿಗಳ ಪ್ರವೇಶ ಪಡೆಯತಕ್ಕದ್ದು.
3. ಕಾಲೇಜು ಎನ್.ಸಿ.ಟಿ.ಇ ಅಧಿನಿಯಮ 1993ರ 14ನೇ ಪ್ರಕರಣದಡಿ ಮಾನ್ಯತೆಯನ್ನು ಹೊಂದಿರತಕ್ಕದ್ದು.
4. **ಕಾಲೇಜು ಎನ್.ಸಿ.ಟಿ.ಇ ಜಾರಿಗೊಳಿಸಿರುವ ನೋಟಿಸ್‌ನಲ್ಲಿ ನಿರ್ದಿಷ್ಟ ಪಡಿಸಲಾಗಿರುವ ಷರುತ್ತುಗಳನ್ನು ಕಟ್ಟು-ನಿಟ್ಟಾಗಿ ಪೂರೈಸತಕ್ಕದ್ದು. ಎನ್.ಸಿ.ಟಿ.ಇ ಮಾನ್ಯತೆ ಹೊಂದದ ಹೊರತು ಕಾಲೇಜು ವಿಧ್ಯಾರ್ಥಿಗಳ ಪ್ರವೇತ ಪಡೆಯತಕ್ಕದ್ದಲ್ಲ.**
5. **ಕಾಲೇಜು ಹೆಸರು, ಕಟ್ಟಡ, ಸ್ಥಳ ಬದಲಾವಣೆಗೆ ಎನ್.ಸಿ.ಟಿ.ಇ ಸರ್ಕಾರ ಮತ್ತು ವಿಶ್ವವಿದ್ಯಾಲಯ ಅನುಮತಿಯನ್ನು ಕಡ್ಡಾವಾಗಿ ಪಡೆಯತಕ್ಕದ್ದು.**
6. ನಿರ್ದಿಷ್ಟ ವಿನಾಯಿತಿ ನೀಡಿದ ಹೊರತು ವಿಶ್ವವಿದ್ಯಾಲಯ ಮಂಜೂರು ಮಾಡಿರುವ ಮುಂದುವರಿಕೆ ಸಂಯೋಜನೆ ಮತ್ತು ಎನ್.ಸಿ.ಟಿ.ಇ ಮಂಜೂರು ಮಾಡಿರುವ ಮಾನ್ಯತೆ ರಹಿತವಾಗಿ ವಿಧ್ಯಾರ್ಥಿಗಳ ಪ್ರವೇಶ ಪಡೆಯುವುದು, **ಕರ್ನಾಟಕ ಮಾನ್ಯತೆ ರಹಿತ ಮತ್ತು ಅಸಂಯೋಜಿತ ಶಿಕ್ಷಣ ಸಂಸ್ಥೆಗಳಿಗೆ ವಿಧ್ಯಾರ್ಥಿಗಳ ಪ್ರವೇಶ ನಿಷೇದ ಅಧಿನಿಯಮ 1992ರ 3ನೇ ಪ್ರಕರಣದ ಉಲ್ಲಂಘನೆಯಾಗಿದ್ದು ಮೊಕದ್ದಮೆ ಹೂಡಲು ಆಕರ್ಷಿತವಾಗಿರುತ್ತದೆ.**
7. ನಿಗದಿತ ವಿಧ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿಧ್ಯಾರ್ಥಿಗಳ ಪ್ರವೇಶ ಪಡೆಯುವುದು ಕೆ.ಎಸ್.ಯು. ಅಧಿನಿಯಮ 2000ದ 60ನೇ ಪ್ರಕರಣದ ಉಲ್ಲಂಘನೆಯಲ್ಲದೆ ಮೇಲ್ಕಂಡ 1992ರ ಅಧಿನಿಯಮ 4ನೇ ಪ್ರಕರಣದ ಉಲ್ಲಂಘನೆ ಸಹ ಆಗಿದ್ದು, ಮೊಕದ್ದಮೆ ಹೂಡಲು ಆರ್ಕಷಿತವಾಗುವುದಲ್ಲದೆ ಸೊಯೋಜನೆ ಹಿಂತೆಗೆದುಕೊಳ್ಳಲು ಸಕಾರಣವಾಗುತ್ತದೆ.
8. ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಷರುತ್ತಗಳನ್ನು ಕಟ್ಟು-ನಿಟ್ಟಾಗಿ ಪಾಲಿಸತಕ್ಕದ್ದು.